ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ:ಕಾಶಿಇ:ಶೈವಿ:23:ಡಿಟಿಐ:ತರಬೇತಿ:2020-21

ದಿನಾಂಕ:28.11.2022

**ಅಧಿಕೃತ ಜ್ಞಾಪನ**

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಬೋಧಕೇತರ ಸಿಬ್ಬಂದಿ ವರ್ಗದವರಿಗೆ ಆಡಳಿತಾತ್ಮಕ ತರಬೇತಿ ನೀಡುವ ಬಗ್ಗೆ.

ಉಲ್ಲೇಖ: ಪ್ರಾಚಾರ್ಯರು, ಜಿಲ್ಲಾ ತರಬೇತಿ ಸಂಸ್ಥೆ, ಬೆಂಗಳೂರು ನಗರ, ಇವರ ಪತ್ರ ಸಂಖ್ಯೆ:DTI/235/TRN/TRG/2022-DTI-BUR-DTI ದಿನಾಂಕ:19.11.2022.

******

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಕಛೇರಿಯಲ್ಲಿನ ದೈನಂದಿನ ಕಾರ್ಯವೈಖರಿಯನ್ನು ಉತ್ತಮ ಪಡಿಸುವ ನಿಟ್ಟಿನಲ್ಲಿ ಇಲಾಖೆಯ ಬೋಧಕೇತರ ಸಿಬ್ಬಂದಿಗಳಿಗೆ ಉಪಯುಕ್ತವಾಗುವಂತಹ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ವಿಷಯಗಳಿಗೆ ಸಂಬಂಧಿಸಿದಂತೆ ಇಲಾಖೆಯ ವತಿಯಿಂದ ಜಿಲ್ಲಾ ತರಬೇತಿ ಸಂಸ್ಥೆ, ಬೆಂಗಳೂರು ನಗರ, ಕೃಷಿ ಸಂಕೀರ್ಣದ ಪಕ್ಕ, ಕನಕಪುರ ಮುಖ್ಯರಸ್ತೆ, ಬನಶಂಕರಿ, ಇಲ್ಲಿ ದಿನಾಂಕ:05.12.2022 ರಿಂದ 07.12.2022 ರವರೆಗೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ತತ್ಸಂಬಂಧವಾಗಿ ಈ ಅಧಿಕೃತಜ್ಞಾಪನದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ನಮೂದಿಸಿರುವ ಬೋಧಕೇತರ ಸಿಬ್ಬಂದಿಗಳು ಕಡ್ಡಾಯವಾಗಿ ಈ ತರಬೇತಿ ಕಾರ್ಯಕ್ರಮಕ್ಕೆ ಹಾಜರಾಗಲು ಹಾಗೂ ತರಬೇತಿಯಲ್ಲಿ ಭಾಗವಹಿಸುವ ಸಿಬ್ಬಂದಿಗಳು ಸದರಿ ದಿನಾಂಕಗಳಂದು ಬೆಳಿಗ್ಗೆ 10.00 ಗಂಟೆಗೆ ಹಾಜರಾಗಿ ತರಬೇತಿಗೆ ವರದಿ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ. ಹಾಗೂ ತರಬೇತಿಯಲ್ಲಿ ಭಾಗವಹಿಸಿದ ಸಿಬ್ಬಂದಿಗಳು ನಿಯಮಾನುಸಾರ ಭತ್ಯೆಗಳಿಗೆ ಅರ್ಹರಿರುತ್ತಾರೆ ಮತ್ತು ಪ್ರಸ್ತುತ ಚಾಲ್ತಿಯಲ್ಲಿರುವ SOP ಯಲ್ಲಿನ ಕೋವಿಡ್-19ರ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವ ಷರತ್ತಿಗೊಳಪಟ್ಟು ತರಬೇತಿ ಅವಧಿಯ ಅನುಪಸ್ಥಿತಿಯನ್ನು ಹಾಜರಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ಅಧಿಕಾರಿಗಳಿಗೆ ಒಪ್ಪಿಸುವ ನಿಬಂಧನೆಗೊಳಪಟ್ಟು ಅನ್ಯಕಾರ್ಯ ನಿಮಿತ್ತ ಮಂಜೂರು ಮಾಡಲಾಗಿದೆ.

29/11/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ: -ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ

ಅನುಬಂಧದಲ್ಲಿ ನಮೂದಿಸಿರುವ ಎಲ್ಲಾ ಬೋಧಕೇತರ ಸಿಬ್ಬಂದಿಗಳಿಗೆ - ಪ್ರತಿ ಸಿಬ್ಬಂದಿಯು ತಮ್ಮ ತರಬೇತಿ ಅವಧಿಯಲ್ಲಿ ಪಡೆದುಕೊಂಡ ವಿಷಯವಾರು ಅನುಭವದ ಬಗ್ಗೆ ವರದಿ ಸಿದ್ಧಪಡಿಸಿ ಮಾನ್ಯ ಮುಖ್ಯ ಆಡಳಿತಾಧಿಕಾರಿಗಳಿಗೆ ಸಲ್ಲಿಸಲು ಸೂಚಿಸಿದೆ.

ಪ್ರತಿಗಳು:

1. ಪ್ರಾಚಾರ್ಯರು, ಜಿಲ್ಲಾ ತರಬೇತಿ ಸಂಸ್ಥೆ, ಬೆಂಗಳೂರು ನಗರ, ಕೃಷಿ ಸಂಕೀರ್ಣದ ಪಕ್ಕ, ಕನಕಪುರ ಮುಖ್ಯರಸ್ತೆ, ಬನಶಂಕರಿ, ಬೆಂಗಳೂರು – 560 070.
2. ಆಯುಕ್ತರು, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರು ಅಪ್ತ ಶಾಖೆಗಳಿಗೆ,.
3. ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಬೆಂಗಳೂರು– ಮಾಹಿತಿಗಾಗಿ
4. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು– ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು
5. ಕಛೇರಿ ಪ್ರತಿ.

ಅನುಬಂಧ

ತರಬೇತಿ ವಿಷಯ: ಕೆ.ಸಿ.ಎಸ್.ನಡತೆ ನಿಯಮಗಳು-2021 ಮತ್ತು ಕ.ನ.ಸೇ. (ವ.ನಿ.ಮೇ) ನಿಯಮಗಳು 1957

ತರಬೇತಿ ದಿನಾಂಕ: 05-12-2022 ರಿಂದ 07.12.2022 ರವರೆಗೆ

| ಕ್ರ.ಸಂ. | ಹೆಸರು ಶ್ರೀ / ಶ್ರೀಮತಿ | ಪದನಾಮ | ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ವಿಭಾಗದ ಹೆಸರು |
|---|---|---|---|
| 1 | ನಾಗರತ್ನ ಎನ್ | ಅಧೀಕ್ಷಕರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಲ್ಲೇಶ್ವರಂ, ಬೆಂಗಳೂರು. |
| 2 | ಅೀಲಾ | ಅಧೀಕ್ಷಕರು | ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. |
| 3 | ಮಂಜುಳ | ಪ್ರ.ದ.ಸ. | ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. |
| 4 | ಸೌಮ್ಯ | ಪ್ರ.ದ.ಸ. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಯಲಹಂಕ. |
| 5 | ಲಕ್ಷ್ಮಿದೇವಿ | ಪ್ರ.ದ.ಸ. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಸವನಗುಡಿ. |
| 6 | ಚೈತ್ರ ಟಿ | ಪ್ರ.ದ.ಸ. | ಪ್ರಾದೇಶಿಕ ಕಛೇರಿ, ಬೆಂಗಳೂರು. |
| 7 | ಕವಿತ ಎನ್ | ಪ್ರ.ದ.ಸ. | ಸರ್ಕಾರಿ ಕಲಾ ಕಾಲೇಜು, ಬೆಂಗಳೂರು. |
| 8 | ರಮಪ್ರಭ | ಪ್ರ.ದ.ಸ. | ಸರ್ಕಾರಿ ಆರ್.ಸಿ.ಕಾಲೇಜು, ಬೆಂಗಳೂರು. |
| 9 | ನೀಲಮ್ಮ | ಪ್ರ.ದ.ಸ. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಟಿ. ದಾಸರಹಳ್ಳಿ. |
| 10 | ಪ್ರಿಯ | ದ್ವಿ.ದ.ಸ. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿಜಯನಗರ. |

29/11/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ